**ಕರ್ನಾಟಕ ಸರ್ಕಾರದ ನಡವಳಿಗಳು**
**ಜಲ ಸಂಪನ್ಮೂಲ ಇಲಾಖೆ**

ವಿಷಯ:- ಹಾವೇರಿ ಜಿಲ್ಲೆ, ರಾಣೆಬೆನ್ನೂರು ತಾಲ್ಲೂಕಿನ 18 ಕೆರೆಗಳನ್ನು ಹಾಗೂ ಮೆಡ್ಲೇರಿ ಮತ್ತು ರಾಹುತನಕಟ್ಟೆ ಕೆರೆಗಳನ್ನು ತುಂಗಭದ್ರಾ ನದಿಯಿಂದ ತುಂಬಿಸುವ ಯೋಜನೆಯ ರೂ.206.00ಕೋಟಿಗಳ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ:-ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ, ಇವರ ಪತ್ರ ಸಂಖ್ಯೆ: ಕನೀನಿ/ತುಂಮೇಯೋ/ಹೊಳೆಅನ್ವೇರಿ/100/2020/3968 ದಿನಾಂಕ:11.11.2020, ಪತ್ರ ಸಂಖ್ಯೆ: 5242 ದಿನಾಂಕ: 04.12.2020 ಮತ್ತು ಪತ್ರ ಸಂಖ್ಯೆ:0411 ದಿನಾಂಕ:23.04.2021.

----***----

**ಪ್ರಸ್ತಾವನೆ:**

ಹಾವೇರಿ ಜಿಲ್ಲೆಯ ರಾಣೆಬೆನ್ನೂರು ತಾಲ್ಲೂಕಿನ ಕೆರೆಗಳಲ್ಲಿ ನಿಗದಿತ ಪ್ರಮಾಣದಲ್ಲಿ ನೀರು ಸಂಗ್ರಹಣೆಯಾಗದೇ ಇರುವುದರಿಂದ, ಜನ-ಜಾನುವಾರುಗಳಿಗೆ ಕುಡಿಯುವ ನೀರು ಒದಗಿಸಿ ನೀರಿನ ಬವಣೆಯನ್ನು ನೀಗಿಸಲು ಹಾಗೂ ಅಂತರ್ಜಲ ಮಟ್ಟವನ್ನು ಅಭಿವೃದ್ಧಿಪಡಿಸಲು ಸದರಿ ಕಾಮಗಾರಿಯು ಅವಶ್ಯಕವೆಂದು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು ಮೇಲೆ ಓದಲಾದ ಪತ್ರಗಳಲ್ಲಿ ತಿಳಿಸಿರುತ್ತಾರೆ. ಆದ್ದರಿಂದ, ಸದರಿ ಕೆರೆಗಳನ್ನು ತುಂಬಿಸಿ ಈ ಭಾಗದ ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಬವಣೆಯನ್ನು ನೀಗಿಸಲು ಮತ್ತು ಅಂತರ್ಜಲ ಮಟ್ಟವನ್ನು ವೃದ್ಧಿಸಲು ಉದ್ದೇಶಿಸಲಾಗಿದೆ ಎಂದು ತಿಳಿಸುತ್ತ, ಹಾವೇರಿ ಜಿಲ್ಲೆ, ರಾಣೆಬೆನ್ನೂರು ತಾಲ್ಲೂಕಿನ 18 ಕೆರೆಗಳನ್ನು ಹಾಗೂ ಮೆಡ್ಲೇರಿ ಮತ್ತು ರಾಹುತನಕಟ್ಟೆ ಕೆರೆಗಳನ್ನು ತುಂಗಭದ್ರಾ ನದಿಯಿಂದ ತುಂಬಿಸುವ ಯೋಜನೆಯ ರೂ.206.00ಕೋಟಿಗಳ ವಿವರವಾದ ಯೋಜನಾ ವರದಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ದಿನಾಂಕ:30.09.2020ರಂದು ಜರುಗಿದ ನಿಗಮದ ಅಂದಾಜು ಪರಿಶೀಲನಾ ಸಮಿತಿಯ 72ನೇ ಸಭೆಯಲ್ಲಿ ಮಂಡಿಸಲಾಗಿರುತ್ತದೆ. ಸಮಿತಿಯು ಸದರಿ ಯೋಜನೆಗೆ ನಿಗಮದ ನಿರ್ದೇಶಕರ ಮಂಡಳಿಯ ಅನುಮೋದನೆ ಪಡೆದು, ಸರ್ಕಾರಕ್ಕೆ ಆಡಳಿತಾತ್ಮಕ ಅನುಮೋದನೆ ಸಲ್ಲಿಸಲು ಶಿಫಾರಸ್ಸು ಮಾಡಿರುವುದಾಗಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು ತಿಳಿಸಿರುತ್ತಾರೆ.

ಮುಂದುವರೆದು, ಯೋಜನೆಯನ್ನು ಕೈಗೆತ್ತಿಕೊಳ್ಳಲು ಅವಶ್ಯವಿರುವುದರಿಂದ, ಸದರಿ ಪ್ರಸ್ತಾವನೆಗೆ ನಿಗಮದ ನಿರ್ದೇಶಕರ ಮಂಡಳಿಯ ಅನುಮೋದನೆಯನ್ನು ಕಾಯ್ದಿರಿಸಿ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಮಾಡಿರುವುದಾಗಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ ರವರು ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ, ಹಾವೇರಿ ಜಿಲ್ಲೆ, ರಾಣೆಬೆನ್ನೂರು ತಾಲ್ಲೂಕಿನ 18 ಕೆರೆಗಳನ್ನು ಹಾಗೂ ಮೆಡ್ಲೇರಿ ಮತ್ತು ರಾಹುತನಕಟ್ಟೆ ಕೆರೆಗಳನ್ನು ತುಂಗಭದ್ರಾ ನದಿಯಿಂದ ತುಂಬಿಸುವ 2018-19ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಲಾಗಿರುವ ಯೋಜನೆಯ ರೂ.206.00ಕೋಟಿಗಳ ವಿವರವಾದ ಯೋಜನಾ ವರದಿಗೆ, ಆಡಳಿತಾತ್ಮಕ ಅನುಮೋದನೆ ನೀಡುವಂತೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತರವರು ಸರ್ಕಾರವನ್ನು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಜಸಂಇ 137 ಎಂಎಂಬಿ 2020, ಬೆಂಗಳೂರು, ದಿನಾಂಕ:16.06.2021**

ಹಾವೇರಿ ಜಿಲ್ಲೆ, ರಾಣೆಬೆನ್ನೂರು ತಾಲ್ಲೂಕಿನ 18 ಕೆರೆಗಳನ್ನು ಹಾಗೂ ಮೆಡ್ಲೇರಿ ಮತ್ತು ರಾಹುತನಕಟ್ಟೆ ಕೆರೆಗಳನ್ನು ತುಂಗಭದ್ರಾ ನದಿಯಿಂದ ತುಂಬಿಸುವ 2018-19ನೇ ಸಾಲಿನ ದರಪಟ್ಟಿಯನ್ವಯ ತಯಾರಿಸಲಾಗಿರುವ ಯೋಜನೆಯ ರೂ.206.00ಕೋಟಿಗಳ (ಇನ್ನೂರಾ ಆರು ಕೋಟಿ ರೂಪಾಯಿಗಳು ಮಾತ್ರ) ವಿವರವಾದ ಯೋಜನಾ ವರದಿಗೆ, ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡಿ, ಯೋಜನೆಯನ್ನು 2 ಹಂತಗಳಲ್ಲಿ ಅಂದರೆ, ಮೊದಲನೇ ಹಂತದಲ್ಲಿ ರೂ.120.00ಕೋಟಿ ಮತ್ತು 2ನೇ ಹಂತದಲ್ಲಿ ರೂ.86.00ಕೋಟಿ ಮೊತ್ತದಲ್ಲಿ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ಕ್ರಮ ವಹಿಸಿ, ಪ್ರಸಕ್ತ ಸಾಲಿನಲ್ಲಿ ಮೊದಲನೇ ಹಂತದ ಕಾಮಗಾರಿಗೆ ಟೆಂಡರ್ ಆಹ್ವಾನಿಸುವ ಷರತ್ತಿಗೊಳಪಟ್ಟು, ಸರ್ಕಾರದ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 386 ಆಕೋ-1/2020 (ಇ-ಆಫೀಸ್) ದಿನಾಂಕ:16.06.2021ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ PDS 17 MCM 2020-PPD ದಿನಾಂಕ: 08.12.2020ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

16/6/21

(ಶ್ರೀಹರಿ ಎಸ್.ಆರ್.)
ಸರ್ಕಾರದ ಅಧೀನ ಕಾರ್ಯದರ್ಶಿ(ತಾಂತ್ರಿಕ-1)
ಜಲಸಂಪನ್ಮೂಲ ಇಲಾಖೆ

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ, ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
2. ಪ್ರಧಾನ ಮಹಾಲೇಖಪಾಲರು, (ಆರ್ಥಿಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು 01.
3. ಪ್ರಧಾನ ಮಹಾಲೇಖಪಾಲರು, (ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ) ಕರ್ನಾಟಕ ಬೆಂಗಳೂರು 01.
4. ಸರ್ಕಾರದ ಉಪಕಾರ್ಯದರ್ಶಿ, (ಸಚಿವ ಸಂಪುಟ) ವಿಧಾನಸೌಧ.
5. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು.
7. ಮುಖ್ಯ ಇಂಜಿನಿಯರ್, ತುಂಗಾ ಮೇಲ್ದಂಡೆ ಯೋಜನಾ ವಲಯ, ಶಿವಮೊಗ್ಗ.
8. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ, ಆರ್ಥಿಕ ಕೋಶ) ವಿಧಾನ ಸೌಧ, ಬೆಂಗಳೂರು.
9. ಮಾನ್ಯ ಜಲ ಸಂಪನ್ಮೂಲ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
10. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಜ.ಸಂ ಇಲಾಖೆ.
11. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ.
12. ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಜ.ಸಂ.ಇಲಾಖೆ.
13. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, (ಕೃ.ಭಾ.ಜ.ನಿ.) ಜ.ಸಂ.ಇ.
14. ತಾಂತ್ರಿಕ ಸಹಾಯಕರು – (ತಾಂತ್ರಿಕ – 6)
15. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.